ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಬಡ ಮಕ್ಕಳಿಗೆ ಟ್ಯಾಬ್ ವಿತರಿಸುವ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) –

91 (91) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) 2020-21ನೇ ಶೈಕ್ಷಣಿಕ ಸಾಲಿನಲ್ಲಿ ಕರೋನಾ ಖಾಯಿಲೆಯ ಕಾರಣದಿಂದ ಅನ್‌ಲೈನ್ ಶಿಕ್ಷಣ ನೀಡುತ್ತಿದ್ದು ಬಡ ಮಕ್ಕಳಿಗೆ ಟ್ಯಾಬ್ ವಿತರಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳಾವುವು;

(ಆ) ಬಡ ಮಕ್ಕಳಿಗೆ ಸಂಘ ಸಂಸ್ಥೆಗಳು ಉಚಿತ ಟ್ಯಾಬ್ ವಿತರಿಸಿದರೂ ಸದರಿ ಟ್ಯಾಬ್‌ಗಳಿಗೆ ಪ್ರತಿ ತಿಂಗಳು ನೆಟ್‌ವರ್ಕ್‌ಗಾಗಿ ಹಣ ನೀಡಬೇಕಾಗಿದ್ದು, ಈ ಕುರಿತು ಉಚಿತ ನೆಟ್‌ವರ್ಕ್ ನೀಡುವ ಬಗ್ಗೆ ಸರ್ಕಾರದ ನಿಲುವೇನು;

(ಇ) ಆನ್‌ಲೈನ್ ಶಿಕ್ಷಣ ಕೇವಲ ಉಳ್ಳವರ ಶ್ರೀಮಂತರ ಮಕ್ಕಳಿಗೆ ಮಾತ್ರವೇ ಅನುಕೂಲಕರವಾಗಿದ್ದು ಬಡ ಮಕ್ಕಳಿಗೆ ಸಹಾಯ ಮಾಡುವ ರೀತಿಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳಾವುವು; ಅನ್‌ಲೈನ್ ಶಿಕ್ಷಣದ ಕಾರಣಕ್ಕಾಗಿ ಕಡ್ಡಾಯ ಶಿಕ್ಷಣದಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು?